**All India Radio: Bangalore**
**Regional Bulletin In Kannada**
**28.02.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**28.02.2026 / 2.30 p.m.**

**<><><><>**

ಮುಖ್ಯಾಂಶಗಳು

1. ಹೆಚ್.ಪಿ.ವಿ. ರಾಷ್ಟ್ರವ್ಯಾಪಿ ಲಸಿಕಾ ಅಭಿಯಾನಕ್ಕೆ ರಾಜಸ್ಥಾನದ ಅಜ್ಮೇರ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಚಾಲನೆ
2. ಬೆಳಗಾವಿಯಲ್ಲಿ ವಾಯವ್ಯ ರಸ್ತೆ ಸಾರಿಗೆ ಸಂಸ್ಥೆಗೆ ೨೫೦ ಬಸ್ ಲೋಕಾರ್ಪಣೆಗೊಳಿಸಿದ ಸಚಿವ ರಾಮಲಿಂಗಾರೆಡ್ಡಿ
3. ನಿಗಮ ಮಂಡಳಿ, ಪ್ರಾಧಿಕಾರಗಳ ಅಧ್ಯಕ್ಷರ ಅವಧಿ ವಿಸ್ತರಿಸಿ, ರಾಜ್ಯ ಸರ್ಕಾರ ಆದೇಶ
4. ಇಂದು ರಾಷ್ಟ್ರೀಯ ವಿಜ್ಞಾನ ದಿನ ; ವಿಜ್ಞಾನಿಗಳಿಗೆ, ಸಂಶೋಧಕರಿಗೆ ಗಣ್ಯರಿಂದ ಶುಭಾಶಯ\
5. ಜಮ್ಮು ಕಾಶ್ಮೀರಕ್ಕೆ ರಣಜಿ ಟ್ರೋಫಿ ; ಕರ್ನಾಟಕ ವಿರುದ್ಧದ ಫೈನಲ್ ಪಂದ್ಯ ಡ್ರಾನಲ್ಲಿ ಅಂತ್ಯ

<><><><>

ರಾಜಸ್ಥಾನದ ಅಜ್ಮೇರ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ, ಹ್ಯೂಮನ್ ಪ್ಯಾಪಿಲೋಮ ವೈರಸ್-ಹೆಚ್.ಪಿ.ವಿ. ಲಸಿಕೆ ಹಾಕುವ ರಾಷ್ಟ್ರವ್ಯಾಪಿ ಅಭಿಯಾನಕ್ಕೆ ಇಂದು ಚಾಲನೆ ನೀಡಿದರು. ಈ ಅಭಿಯಾನ ಕ್ಯಾನ್ಸರ್ ಸಂಬಂಧಿತ ಕಾಯಿಲೆಗೆ ಪ್ರಮುಖ ಕಾರಣಗಳಲ್ಲಿ ಒಂದಾದ ಗರ್ಭಕಂಠ ಕ್ಯಾನ್ಸರ್ ತಡೆಗಟ್ಟುವ ಗುರಿ ಹೊಂದಿದೆ. ಈ ಲಸಿಕೆ ದೇಶಾದ್ಯಂತ ಮಹಿಳೆಯರ ದೀರ್ಘಕಾಲಿನ ಆರೋಗ್ಯವನ್ನು ಕಾಪಾಡುವಲ್ಲಿ ಮಹತ್ವದ ಪಾತ್ರ ವಹಿಸಲಿದೆ. ದೇಶಾದ್ಯಂತ ಜಾರಿಗೆ ತರಲಾದ ಈ ಯೋಜನೆಯು ಭಾರತದ ಸಾರ್ವಜನಿಕ, ಆರೋಗ್ಯ ಕ್ಷೇತ್ರದಲ್ಲಿ ನಿರ್ಣಾಯಕ ಹೆಜ್ಜೆಯಾಗಿದೆ. ಈ ಕಾರ್ಯಕ್ರಮವು ಎಲ್ಲ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಪ್ರತಿವರ್ಷ ೧೪ ವರ್ಷ ವಯಸ್ಸಿನ ಸುಮಾರು ೧ ಕೋಟಿ ೧೫ ಲಕ್ಷ ಬಾಲಕಿಯರನ್ನು ಲಸಿಕೆಗೊಳಪಡಿಸುವ ಗುರಿ ಹೊಂದಲಾಗಿದೆ.

<><><><>

ಕಳೆದ ಆಯವ್ಯಯದಲ್ಲಿ ಘೋಷಿಸಿದಂತೆ ಎರಡು ಸಾವಿರ ಹೊಸ ಬಸ್‌ಗಳ ಖರೀದಿ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ಬೆಳಗಾವಿ ಕೇಂದ್ರ ಬಸ್ ನಿಲ್ದಾಣದಲ್ಲಿ ಇಂದು ನಡೆದ ವಾಯುವ್ಯ ರಸ್ತೆ ಸಾರಿಗೆ ಸಂಸ್ಥೆಯ ೨೮ನೇ ಸಂಸ್ಥಾಪನಾ ದಿನಾಚರಣೆಯಲ್ಲಿ ವಾಯುವ್ಯ ರಸ್ತೆ ಸಾರಿಗೆ ಸಂಸ್ಥೆಗೆ ೭೦೦ ವಾಹನಗಳ ಪೈಕಿ ಇಂದು ೨೫೦ ಬಸ್‌ಗಳನ್ನು ಅವರು ಲೋಕಾರ್ಪಣೆಗೊಳಿಸಿದರು. ಈ ವೇಳೆ ಮಾತನಾಡಿದ ಅವರು, ವಾಯುವ್ಯ ರಸ್ತೆ ಸಾರಿಗೆ ಸಂಸ್ಥೆಗೆ ಕಿತ್ತೂರು ರಾಣಿ ಚನ್ನಮ್ಮ ಸಾರಿಗೆ ಸಂಸ್ಥೆ ಎಂದು ನಾಮಕರಣಕ್ಕೆ ಶೀಘ್ರವೇ ಕ್ರಮ ವಹಿಸಲಾಗುವುದು ಎಂದು ಹೇಳಿದ್ದಾರೆ. ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಮಾತನಾಡಿ, ಜಿಲ್ಲೆಯ ಬಹುದಿನಗಳ ಬೇಡಿಕೆಗಳು ಇಂದು ಈಡೇರಿದೆ. ಪ್ರಸ್ತುತ ೭ ಸಾವಿರದ ೮೦೦ ಹೊಸ ಬಸ್ ಖರಿದಿಸಿದ್ದು, ೯ ಸಾವಿರ ಅಭ್ಯರ್ಥಿಗಳ ನೇಮಕಾತಿ, ೧ ಸಾವಿರ ಅಭ್ಯರ್ಥಿಗಳಿಗೆ ಅನುಕಂಪದ ನೇಮಕಾತಿ ಮಾಡಿರುವುದು ದಾಖಲೆಯಾಗಿದೆ ಎಂದು ತಿಳಿಸಿದ್ದಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮಾತನಾಡಿ, ಹಗಲು ರಾತ್ರಿ ಶ್ರಮ ವಹಿಸಿ ಕೆಲಸ ನಿರ್ವಹಿಸುವ ಸಾರಿಗೆ ಇಲಾಖೆ ಸಿಬ್ಬಂದಿ ಕಾರ್ಯವನ್ನು ಶ್ಲಾಘಿಸಿದರು. ಇದೇ ಸಂದರ್ಭದಲ್ಲಿ ಅಪಘಾತ ರಹಿತ ೬೮ ಚಾಲಕರಿಗೆ ಬೆಳ್ಳಿಪದಕ, ೧೮೮, ಅಭ್ಯರ್ಥಿಗಳಿಗೆ ನೇಮಕಾತಿ ಪತ್ರ, ವೈಯಕ್ತಿಕ ಅಪಘಾತ, ಕುಟುಂಬ ಕಲ್ಯಾಣ ನಿಧಿ ಯೋಜನೆಯ ಪರಿಹಾರ ಚೆಕ್ ವಿತರಿಸಲಾಯಿತು.

<><><><>

ರಾಜ್ಯ ಸರ್ಕಾರವು ನಿಗಮ ಮಂಡಳಿ ಹಾಗೂ ಪ್ರಾಧಿಕಾರಗಳ ಅಧ್ಯಕ್ಷರ ಅವಧಿಯನ್ನು ವಿಸ್ತರಿಸಿ ಆದೇಶ ಹೊರಡಿಸಿದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ಈ ಕುರಿತು ಅಧಿಸೂಚನೆ ಹೊರಡಿಸಿದೆ. ನಿನ್ನೆಯಷ್ಟೇ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದು ಅವಧಿ ವಿಸ್ತರಿಸುವಂತೆ ಮನವಿ ಮಾಡಿದ್ದರು. ಸರ್ಕಾರದ ವಿವಿಧ ಇಲಾಖೆಗಳ ಅಧೀನದಲ್ಲಿ ಬರುವ ನಿಗಮ ಮಂಡಳಿ ಹಾಗೂ ಪ್ರಾಧಿಕಾರಗಳ ನಾಮ ನಿರ್ದೇಶನಗೊಂಡ ಅಧ್ಯಕ್ಷರ ಅವಧಿ ಮುಕ್ತಾಯಗೊಂಡ ಹಾಗೂ ಮುಕ್ತಾಯಗೊಳ್ಳಲಿರುವ ಅವಧಿಯನ್ನು ಮುಂದಿನ ಆದೇಶದವರೆಗೆ ಮುಂದುವರಿಸಲಾಗಿದೆ.

<><><><>

ದೇಶಾದ್ಯಂತ ಇಂದು ರಾಷ್ಟ್ರೀಯ ವಿಜ್ಞಾನ ದಿನವನ್ನು ಆಚರಿಸಲಾಗುತ್ತಿದೆ. ಖ್ಯಾತ ಭೌತಶಾಸ್ತ್ರಜ್ಞ ಸರ್.ಸಿ.ವಿ.ರಾಮನ್, ರಾಮನ್ ಎಫೆಕ್ಟ್ ಕಂಡು ಹಿಡಿದ ನೆನಪಿಗಾಗಿ ಪ್ರತಿವರ್ಷ ಫೆಬ್ರವರಿ ೨೮ರಂದು ರಾಷ್ಟ್ರೀಯ ವಿಜ್ಞಾನ ದಿನವನ್ನಾಗಿ ಆಚರಿಸಲಾಗುತ್ತಿದೆ. ಈ ಅದ್ಭುತ ಆವಿಷ್ಕಾರಕ್ಕಾಗಿ ರಾಮನ್ ಅವರಿಗೆ ೧೯೩೦ರಲ್ಲಿ ನೊಬೆಲ್ ಪ್ರಶಸ್ತಿ ನೀಡಿ ಗೌರವಿಸಲಾಗಿತ್ತು. ರಾಷ್ಟ್ರೀಯ ವಿಜ್ಞಾನ ದಿನದ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಸಾಮಾಜಿಕ ಜಾಲತಾಣದಲ್ಲಿ ದೇಶದ ವಿಜ್ಞಾನಿಗಳು ಹಾಗೂ ಸಂಶೋಧಕರಿಗೆ ಶುಭಾಶಯ ಕೋರಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿಜ್ಞಾನವು ಆಡಳಿತವನ್ನು ಬಲಪಡಿಸುತ್ತದೆ ಮತ್ತು ಸಮಾಜವನ್ನು ಪರಿವರ್ತಿಸುತ್ತದೆ ಎಂದು ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

<><><><>

ರಾಜ್ಯದೆಲ್ಲೆಡೆ ದ್ವಿತೀಯ ಪಿಯುಸಿ ಪರೀಕ್ಷೆ ಆರಂಭವಾಗಿದೆ. ಈ ಬಾರಿ ೭ ಲಕ್ಷದ ೧೦ ಸಾವಿರ ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದಾರೆ. ಶಿಕ್ಷಣ ಇಲಾಖೆ ಸುಗಮ ಪರೀಕ್ಷೆಗಾಗಿ ಸಿದ್ಧತೆ ಕೈಗೊಂಡಿದೆ. ದಾವಣಗೆರೆಯಲ್ಲಿ ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ಮತ್ತು ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಪಳನಿ ವೇಲು ವಿವಿಧ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಚಾಮರಾಜನಗರ ಜಿಲ್ಲೆಯಾದ್ಯಂತ ೧೭ ಪರೀಕ್ಷಾ ಕೇಂದ್ರಗಳಲ್ಲಿ ಪಿಯು ಪರೀಕ್ಷೆ ನಡೆಯಿತು. ಎಲ್ಲಾ ಪರೀಕ್ಷಾ ಕೆಂದ್ರಗಳಲ್ಲಿ ಸಿ.ಸಿ. ಟಿವಿ ಕ್ಯಾಮೆರಾ ಅಳವಡಿಸಲಾಗಿತ್ತು. ಚಾಮರಾಜನಗರ ಜಿಲ್ಲಾ ಕೇಂದ್ರದ ವಿವಿಧ ಪರೀಕ್ಷಾ ಕೇಂದ್ರಗಳಿಗೆ ಜಿಲ್ಲಾಧಿಕಾರಿ ರೂಪಾ, ಪೊಲೀಸ್ ವರಿಷ್ಠಾಧಿಕಾರಿ ಮುತ್ತುರಾಜ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ದ್ವಿತೀಯ ಪಿಯುಸಿ ಪ್ರಥಮ ಭಾಷೆಯ ವಾರ್ಷಿಕ ಪರೀಕ್ಷೆಯು ಜಿಲ್ಲೆಯ ೨೦ ಪರೀಕ್ಷಾ ಕೇಂದ್ರಗಳಲ್ಲಿ ಸುಗಮವಾಗಿ ನಡೆದಿದೆ. ಯಾವುದೇ ಅಹಿತಕರ ಘಟನೆ ನಡೆಯದಂತೆ ಪರೀಕ್ಷಾ ಕೇಂದ್ರದ ಸುತ್ತಮುತ್ತ ಬಿಗಿ ಬಂದೋಬಸ್ತ್ ಮಾಡಲಾಗಿತ್ತು.

<><><><>

೨೦೨೪-೨೬ ಹಂಗಾಮಿನಲ್ಲಿ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಪೂರೈಕೆ ಮಾಡಿದ ರೈತರಿಗೆ ಕಾರ್ಖಾನೆಗಳು ಪಾವತಿಸಬೇಕಾದ ಎಫ್.ಆರ್.ಪಿ ದರ ಹೊರತುಪಡಿಸಿ ಹೆಚ್ಚುವರಿಯಾಗಿ ರಾಜ್ಯ ಸರ್ಕಾರದಿಂದ ೫೦ ರೂಪಾಯಿಯನ್ನು ಪಾವತಿಸಲು ತೀರ್ಮಾನಿಸಲಾಗಿದೆ. ಸಕ್ಕರೆ ಕಾರ್ಖಾನೆ ವತಿಯಿಂದ ಪ್ರತಿ ಟನ್‌ಗೆ ೫೦ ರೂಪಾಯಿಯನ್ನು ಹೆಚ್ಚುವರಿಯಾಗಿ ಪಾವತಿಸಲಾಗುತ್ತದೆ ಎಂದು

ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ರೈತರಿಗೆ ಒಟ್ಟಾಗಿ ಪ್ರತಿ ಟನ್‌ಗೆ ೧೦೦ ರೂಪಾಯಿ ಪಾವತಿಸಲು ಕ್ರಮ ವಹಿಸಲಾಗಿದೆ. ಸದರಿ ಆದೇಶದಂತೆ ಅನುದಾನ ಬಿಡುಗಡೆ ಮಾಡಲು ಅಗತ್ಯ ಕ್ರಮವಹಿಸಲಾಗುವುದು ಎಂದು ಹೇಳಿದ್ದಾರೆ. ಸಭೆಯಲ್ಲಿ ಸಕ್ಕರೆ ಕಾರ್ಖಾನೆಯ ಅಧಿಕಾರಿಗಳು ಹಾಗೂ ಜಿಲ್ಲಾ ಖಜಾನೆ ಅಧಿಕಾರಿ ಉಪಸ್ಥಿತರಿದ್ದರು.

<><><><>

'ಕನ್ನಡದಲ್ಲಿ ಕೃಷಿ ವಿಜ್ಞಾನ ಸಾಹಿತ್ಯ ಇನ್ನಷ್ಟು ವಿಸ್ತಾರವಾಗಬೇಕು. ರೈತರ ವ್ಯವಸಾಯ ಜ್ಞಾನ ಹೆಚ್ಚುವುದರೊಂದಿಗೆ ಕೃಷಿ ವಿಜ್ಞಾನ ಮಾಹಿತಿ ರೈತರಿಗೆ ತಲುಪುವಂತಾಗಬೇಕು ಎಂದು ಕೃಷಿ ವಿಜ್ಞಾನಿ ಎನ್.ದೇವಕುಮಾರ್ ಅಭಿಪ್ರಾಯಪಟ್ಟಿದ್ದಾರೆ. ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಆವರಣದಲ್ಲಿ ನಡೆಯುತ್ತಿರುವ ಕಿಸಾನ್ ಸ್ವರಾಜ್ ಸಮ್ಮೇಳನದಲ್ಲಿ ಬೆಂಗಳೂರಿನ ನದಿ ಪ್ರಕಾಶನ ಪ್ರಕಟಿಸಿರುವ ಡಾ. ಗಣೇಶ ಹೆಗಡೆ ನೀಲೇಸರ ಅವರ 'ಮರ ಮೇವು' ಮತ್ತು ಕೇಶವ ಎಚ್. ಕೊರ್ಸೆ ಅವರ 'ನೆಲ ಮುಗಿಲ ಮಾತು' ಕೃತಿ ಬಿಡುಗಡೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಮರ-ಮೇವು ಕೃತಿಯಲ್ಲಿ ಮೇವು ನೀಡುವ ವಿವಿಧ ಮರಗಳ ಕುರಿತ ಮಾಹಿತಿ ಇದೆ. ಈ ಕೃತಿ ಪಶುವೈದ್ಯಕೀಯ ಪದವಿ ಹಾಗೂ ಡಿಪ್ಲೊಮಾ ವಿದ್ಯಾರ್ಥಿಗಳಿಗೆ ಹೆಚ್ಚಾಗಿ ತಲುಪಬೇಕು ಎಂದು ತಿಳಿಸಿದರು. ಮರ-ಮೇವು ಕೃತಿಯ ಲೇಖಕ ಡಾ. ಗಣೇಶ ಹೆಗಡೆ ನೀಲೇಸರ ಮಾತನಾಡಿ, 'ಕೃತಿಯಲ್ಲಿ ೫೯ ಮೇವಿನ ಮರಗಳ ಕುರಿತು ಮಾಹಿತಿ ನೀಡಲಾಗಿದೆ ಎಂದು ಹೇಳಿದರು.

<><><><>

ಯಾದಗಿರಿ ಜಿಲ್ಲಾ ಮಟ್ಟದ ಉದ್ಯೋಗ ಮೇಳವನ್ನು ಮಾರ್ಚ್ ೨ರಂದು ನಗರದ ಯಾದಗಿರಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ ತಿಳಿಸಿದ್ದಾರೆ. ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುವ ಅವರು, ರಾಜ್ಯದ ವಿವಿಧ ಭಾಗಗಳಿಂದ ಹಾಗೂ ಸ್ಥಳೀಯವಾಗಿ ಸುಮಾರು ೭೫ಕ್ಕೂ ಹೆಚ್ಚು ಬೃಹತ್, ಮಧ್ಯಮ ಮತ್ತು ಸಣ್ಣ ಪ್ರಮಾಣದ ಪ್ರತಿಷ್ಠಿತ ಉದ್ಯಮಗಳ ಪ್ರತಿನಿಧಿಗಳು ಮೇಳದಲ್ಲಿ ಭಾಗವಹಿಸಲಿದ್ದಾರೆ. ಜಿಲ್ಲೆಯ ವಿದ್ಯಾವಂತ ಯುವಕ-ಯುವತಿಯರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಮನವಿ ಮಾಡಿದ್ದಾರೆ. ಖಾಸಗಿ ವಲಯದಲ್ಲಿ

ಉದ್ಯೋಗಾವಕಾಶ ಕಲ್ಪಿಸುವುದು ಮೇಳದ ಮುಖ್ಯ ಉದ್ದೇಶವಾಗಿದೆ. ಉದ್ಯೋಗಾಕಾಂಕ್ಷಿಗಳು ತಮ್ಮ ವಿದ್ಯಾರ್ಹತೆ ಮತ್ತು ಕೌಶಲ್ಯಕ್ಕೆ ಅನುಗುಣವಾಗಿ ಉದ್ಯೋಗ ಆಯ್ಕೆ ಮಾಡಿಕೊಳ್ಳಲು ಅವಕಾಶವಿರಲಿದೆ.

<><><>

ಚಿಕ್ಕಮಗಳೂರು ಜಿಲ್ಲೆಯ ಎನ್.ಆರ್.ಪುರ ತಾಲೂಕು ಕೇಂದ್ರದಿಂದ ಹೊನ್ನೆಕೂಡಿಗೆ ಗ್ರಾಮಕ್ಕೆ ಸಂಪರ್ಕಿಸುವ ಭದ್ರಾ ಹಿನ್ನೀರಿನ ಸೇತುವೆ ಕಾಮಗಾರಿ ಬಹುತೇಕ ಪೂರ್ಣಗೊಂಡಿದೆ ಎಂದು ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ಶ್ರೀನಿವಾಸ್ ತಿಳಿಸಿದ್ದಾರೆ. ಸೇತುವೆ ಕಾಮಗಾರಿ ಪರಿಶೀಲಿಸಿ ಮಾತನಾಡಿದ ಅವರು, ಕಾಮಗಾರಿ ಪೂರ್ಣಗೊಂಡಿದ್ದು ರಾಜ್ಯ ಸರ್ಕಾರ ಸೇತುವೆ ಕಾಮಗಾರಿಗೆ ೪೪ ಕೋಟಿ ೫೦ ಲಕ್ಷ ರೂಪಾಯಿ ಅನುದಾನ ಬಿಡುಗಡೆ ಮಾಡಿದೆ. ಪ್ರಸ್ತುತ ಸೇತುವೆ ನಿರ್ಮಾಣಕ್ಕೆ ೩೮ ಕೋಟಿ ೫೦ ಲಕ್ಷ ರೂಪಾಯಿ ವೆಚ್ಚ ಮಾಡಲಾಗಿದೆ. ಈ ಸೇತುವೆ ನಿರ್ಮಾಣದಿಂದ ಹೊನ್ನೆಕೂಡಿಗೆ ಹಾಗೂ ಸುತ್ತ ಮುತ್ತಲಿನ ಗ್ರಾಮಸ್ಥರಿಗೆ ಕೇವಲ ೫ ಕಿಲೋಮೀಟರ್ ದೂರದಲ್ಲಿ ಪಟ್ಟಣ ತಲುಪಲು ಸಾಧ್ಯವಾಗಲಿದೆ ಎಂದು ತಿಳಿಸಿದ್ದಾರೆ.

<><><>

ಹುಬ್ಬಳ್ಳಿಯ ಕೆಎಸ್‌ಸಿಎ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ರಣಜಿ ಟ್ರೋಫಿ ಫೈನಲ್ ಹಣಾಹಣಿಯಲ್ಲಿ ಕರ್ನಾಟಕ ಮತ್ತು ಜಮ್ಮು ಕಾಶ್ಮೀರ ನಡುವಿನ ಪಂದ್ಯ ಡ್ರಾನಲ್ಲಿ ಅಂತ್ಯಗೊಂಡಿದೆ. ಈ ಮೂಲಕ ಇದೇ ಮೊದಲ ಬಾರಿಗೆ ಜಮ್ಮು ಕಾಶ್ಮೀರ ರಣಜಿ ಟ್ರೋಫಿ ಮುಡಿಗೇರಿಸಿಕೊಂಡಿದೆ. ಈ ಐತಿಹಾಸಿಕ ಕ್ಷಣಕ್ಕೆ ಜಮ್ಮು ಕಾಶ್ಮೀರ ಮುಖ್ಯಮಂತ್ರಿ ಓಮರ್ ಅಬ್ದುಲ್ಲಾ ಕೂಡ ಸಾಕ್ಷಿಯಾಗಿದ್ದರು. ಪಂದ್ಯದ ೫ನೇ ದಿನವಾದ ಇಂದು ೨ನೇ ಇನ್ನಿಂಗ್ಸ್‌ನಲ್ಲಿ ಆಟ ಮುಂದುವರಿಸಿದ್ದ ಜಮ್ಮು-ಕಾಶ್ಮೀರ ೩೪೨ ರನ್ ಗಳಿಸಿದೆ. ಮೊದಲ ಇನ್ನಿಂಗ್ಸ್‌ನಲ್ಲಿ ಜಮ್ಮು ಕಾಶ್ಮೀರ ೫೮೪ ರನ್ ಗಳಿಸಿದರೆ, ಕರ್ನಾಟಕ ೨೯೩ ರನ್‌ಗಳಿಸಲಷ್ಟೇ ಶಕ್ತವಾಗಿತ್ತು.

<><><>

ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ನಗರ ಸ್ವಚ್ಛತೆ ಮತ್ತು ಸಾರ್ವಜನಿಕ ಆರೋಗ್ಯ ರಕ್ಷಣೆಗೆ ಆದ್ಯತೆ ನೀಡುವ ಹಿನ್ನೆಲೆಯಲ್ಲಿ ಇಂದು ಆರು ವಿಧಾನಸಭಾ ಕ್ಷೇತ್ರಗಳಲ್ಲಿ ಬೃಹತ್ ಸ್ವಚ್ಛತಾ ಕಾರ್ಯ ನೆರವೇರಿಸಲಾಯಿತು.

ನಗರ ಪಾಲಿಕೆ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ನೇತೃತ್ವದಲ್ಲಿ ಮಾರ್ಚ್ ೭ ರವರೆಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಈ ಅಭಿಯಾನದಡಿ ಖಾಲಿ ನಿವೇಶನಗಳ ಸ್ವಚ್ಛತೆ ಕೆರೆ, ಮೋರಿ ಸುತ್ತಮುತ್ತ, ಪಾದಾಚಾರಿ ಮಾರ್ಗಗಳ ಸ್ವಚ್ಛತೆ ಹಾಗೂ ಸಾರ್ವಜನಿಕ ಸ್ಥಳಗಳ ಸುಂದರೀಕರಣ ಕಾರ್ಯ ಕೈಗೊಳ್ಳಲಾಗುತ್ತಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>